**ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಮೈಸೂರು ಇವರ ಕಾರ್ಯವಾಹಿಗಳು**

ವಿಷಯ : ಮಂಡ್ಯದ ಜನತಾ ಶಿಕ್ಷಣ ಟ್ರಸ್ಟ್ (ರಿ), ಇವರ ವ್ಯಾಪ್ತಿಯಲ್ಲಿ ಬರುವ ಪಿ.ಇ.ಎಸ್.ವಿಜ್ಞಾನ ಕಲಾ ಮತ್ತು ವಾಣಿಜ್ಯ ಕಾಲೇಜು, ಮಂಡ್ಯ ಇಲ್ಲಿ ಖಾಲಿ ಇರುವ ವಾಣಿಜ್ಯಶಾಸ್ತ್ರ ವಿಷಯದ ಬೋಧಕ ಹುದ್ದೆಗೆ ಆಯ್ಕೆ ಸಮಿತಿಯ ಮೂಲಕ ಆಯ್ಕೆ ಹೊಂದಿದ ಅಭ್ಯರ್ಥಿಯ ಆಯ್ಕೆ ಅನುಮೋದಿಸುವ ಬಗ್ಗೆ.

ಉಲ್ಲೇಖ : ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ : ಕಾಶಿಇ/95/ಖಾಹುಭ/2007-08/ಖಾಕಾವಿ-1/ನೇಪಾವಿ-3 (ಸಂಪುಟ-4), ದಿ: 03-01-2015.

*********

## ಪ್ರಸ್ತಾವನೆ :

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮಂಡ್ಯದ ಜನತಾ ಶಿಕ್ಷಣ ಟ್ರಸ್ಟ್ (ರಿ), ಇವರ ವ್ಯಾಪ್ತಿಯಲ್ಲಿ ಬರುವ ಪಿ.ಇ.ಎಸ್.ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜು, ಮಂಡ್ಯ ಇಲ್ಲಿಗೆ ಮಂಜೂರಾದ ವಾಣಿಜ್ಯಶಾಸ್ತ್ರ ಖಾಲಿ ಹುದ್ದೆಯನ್ನು ಭರ್ತಿ ಮಾಡಲು ಉಲ್ಲೇಖಿತ ಆದೇಶದಲ್ಲಿ ಅನುಮತಿ ನೀಡಲಾಗಿದ್ದು, ಅದರಂತೆ ಆಡಳಿತ ಮಂಡಳಿ, ಜಾಹೀರಾತು ಪ್ರಕಟಿಸಿ ಆಯ್ಕೆ ಸಮಿತಿಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿರುತ್ತಾರೆ. ಆಡಳಿತ ಮಂಡಳಿ ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ನಿಗದಿತ ವಯೋಮಿತಿ ಹಾಗೂ ವಿದ್ಯಾರ್ಹತೆಯನ್ನು ಹೊಂದಿರುವ ಕಾರಣ ಅವರ ನೇಮಕಾತಿಯನ್ನು ಉಲ್ಲೇಖಿತ ಕಾಲೇಜು ಶಿಕ್ಷಣ ಆಯುಕ್ತರು ಅನುಮೋದಿಸಿ ಆದೇಶ ನೀಡಿರುವುದರಿಂದ ಈ ಆದೇಶ.

### ಆದೇಶ ಸಂಖ್ಯೆ : ಪ್ರಾಕಮೈ ಕಾಶಿಇ 06 ಖಾಹುಭ ಜಶಿಟ್ರ-ಮಂಡ್ಯ 2011, ಮೈಸೂರು ದಿನಾಂಕ 06-01-2015

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಮಂಡ್ಯದ ಜನತಾ ಶಿಕ್ಷಣ ಟ್ರಸ್ಟ್ (ರಿ), ಇವರ ವ್ಯಾಪ್ತಿಯಲ್ಲಿ ಬರುವ ಪಿ.ಇ.ಎಸ್.ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜು, ಮಂಡ್ಯ ಇಲ್ಲಿ ಮಂಜೂರಾದ ವಾಣಿಜ್ಯಶಾಸ್ತ್ರ ವಿಷಯದ ಹುದ್ದೆಗೆ ಆಡಳಿತ ಮಂಡಳಿ ಆಯ್ಕೆ ಸಮಿತಿಯ ಮೂಲಕ ಆಯ್ಕೆ ಮಾಡಿಕೊಂಡಿರುವ ಈ ಕೆಳಕಂಡ ಅಭ್ಯರ್ಥಿಗಳ ನೇಮಕಾತಿಯನ್ನು ಅವರುಗಳ ಹೆಸರಿನ ಮುಂದೆ ತಿಳಿಸಿರುವ ವೇತನ ಶ್ರೇಣಿಯಲ್ಲಿ ಈ ಕೆಳಕಂಡ ನಿಬಂಧನಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದೆ.

| ಕ್ರ.ಸಂ | ಹೆಸರು ಮತ್ತು ಪದನಾಮ | ಜನ್ಮ ದಿನಾಂಕ | ವಿದ್ಯಾರ್ಹತೆ | ವೇತನ ಶ್ರೇಣಿ | ಮೀಸಲಾತಿ |
|---|---|---|---|---|---|
| 1 | ವಿ.ಗಿರೀಶ, ವಾಣಿಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು | 23-05-86 | ಎಂ.ಕಾಂ., ಎನ್.ಇ.ಟಿ. | ರೂ. 15600-39100 +6000 ಎಜಿಪಿ (ಯುಜಿಸಿ) | ಸಾಮಾನ್ಯ ವರ್ಗ |

ಷರತ್ತುಗಳು:

1) ಸರ್ಕಾರದ ಆದೇಶ ಸಂಖ್ಯೆ : ಇಡಿ 146 ಯುಪಿಸಿ 1979, ಬೆಂಗಳೂರು ದಿನಾಂಕ 03-10-1981 ಮತ್ತು ಈ ನಿಟ್ಟಿನಲ್ಲಿ ಆಗಿಂದಾಗ್ಗೆ ಹೊರಡಿಸಿರುವ ಮತ್ತು ಹೊರಡಿಸುವ ತಿದ್ದುಪಡಿ ಹಾಗೂ ಸ್ಪಷ್ಟೀಕರಣ ಅನುಗುಣವಾಗಿ ನಿಗದಿಪಡಿಸಿದ ಕಾರ್ಯಭಾರವನ್ನು ಹೊಂದಿರತಕ್ಕದ್ದು. ಅಲ್ಲದೆ ಮುಂದೆ ಸರ್ಕಾರ ವಿಧಿಸಬಹುದಾದ ಷರತ್ತುಗಳಿಗೆ ಈ ನೇಮಕಾತಿ ಒಳಪಟ್ಟಿರುತ್ತದೆ.
2) ಸದರಿ ಅಭ್ಯರ್ಥಿಗಳ ನೇಮಕಾತಿಯು ಈ ಆದೇಶದ ದಿನಾಂಕದ ನಂತರ **ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಜಾರಿಗೆ** ಬರುತ್ತದೆ. ಹಾಗೂ ಯಾವುದೇ ಹಿಂದಿನ ವೇತನ ಬಾಕಿಗೆ ಅರ್ಹತೆ ಹೊಂದಿರುವುದಿಲ್ಲ.
3) ಸದರಿಯವರುಗಳ ನೇಮಕಾತಿಯ ಸೇವಾ ವಿವರಗಳು ಕಾಲೇಜಿನ ಸ್ಥಳೀಯ ಲೆಕ್ಕ ಪತ್ರ ತನಿಖಾ ಸಮಯದಲ್ಲಿ ಪರಿಶೀಲನೆಗೆ ಒಳಪಟ್ಟಿರುತ್ತದೆ. ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಕಾಲೇಜಿಗೆ ನೀಡುತ್ತಿರುವ ಅನುದಾನವನ್ನು ಹಿಂತೆಗೆದುಕೊಳ್ಳುವ ಹಕ್ಕನ್ನು ಕಾಲೇಜು ಶಿಕ್ಷಣ ಆಯುಕ್ತರಿಗೆ ಕಾಯ್ದಿರಿಸಿದೆ.
4) ಈ ನೇಮಕಾತಿಯು ತಾತ್ಕಾಲಿಕವಾಗಿದ್ದು, ಆಗಿಂದಾಗ್ಗೆ ಈ ಸಂಬಂಧ ವಿಧಿಸುವ ಸೇವಾ ಷರತ್ತುಗಳಿಗೆ ಒಳಪಟ್ಟಿರುತ್ತದೆ.
5) ಅಭ್ಯರ್ಥಿಗಳು 06 ತಿಂಗಳೊಳಗಾಗಿ ಅಂಗೀಕೃತ ಸಂಸ್ಥೆಗಳಲ್ಲಿ ಕನ್ನಡ ಮತ್ತು ಆಂಗ್ಲಭಾಷೆಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು ಹಾಗೂ ತೇರ್ಗಡೆಯಾದ ಬಗ್ಗೆ ಪ್ರಮಾಣ ಪತ್ರ ಹಾಜರುಪಡಿಸತಕ್ಕದ್ದು.
6) ಮೇಲ್ಕಂಡ ಅಭ್ಯರ್ಥಿಗಳಿಗೆ ಅವರು ಕೆಲಸಕ್ಕೆ ಹಾಜರಾದ ನಂತರ ಸರ್ಕಾರದ ಆದೇಶ ಸಂಖ್ಯೆ FD(SPI)04 PET 2005 ದಿನಾಂಕ 31-03-2006ರಲ್ಲಿ ಪ್ರಕಟಿತವಾಗಿರುವ NEW DEFINED CONTRIBUTORY PENSIONಅನ್ವಯವಾಗುತ್ತದೆ.

ಪ್ರಾದೇಶಿಕ ಜಂಟಿ ನಿರ್ದೇಶಕರು,
ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ
ಮೈಸೂರು – 570 005

ಪ್ರತಿ:

1) ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2) ಅಧ್ಯಕ್ಷರು, ಜನತಾ ಶಿಕ್ಷಣ ಟ್ರಸ್ಟ್ (ರಿ), ಮಂಡ್ಯ ಇವರಿಗೆ ಮಾಹಿತಿಗಾಗಿ
3) ಪ್ರಾಂಶುಪಾಲರು, ಪಿ.ಇ.ಎಸ್.ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜು, ಮಂಡ್ಯ ಇವರಿಗೆ ಮಾಹಿತಿ ಹಾಗೂ ಕ್ರಮಕ್ಕಾಗಿ
4) ಕಛೇರಿ ಪ್ರತಿ

TRUE COPY

PRINCIPAL
P.E.S. College of Science,
Arts & Commerce, MANDYA.